Akashvani: Bangalore
National Bulletin In Kannada
19.02.2026 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

19.02.2026 : 13.10hrs

********

**ಮುಖ್ಯಾಂಶಗಳು**

1. ನವದೆಹಲಿಯಲ್ಲಿ ೨೦೨೬ರ ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆಗೆ ಚಾಲನೆ; ಭಾರತ ಹೊಸ ತಂತ್ರಜ್ಞಾನ ಅಭಿವೃದ್ಧಿಪಡಿಸುವ ಜತೆಗೆ ಅಳವಡಿಕೆಯಲ್ಲೂ ತ್ವರಿತ ಪ್ರಗತಿ ; ಪ್ರಧಾನಿ ನರೇಂದ್ರ ಮೋದಿ
2. ಆರೋಗ್ಯ, ರಕ್ಷಣೆ, ಕೃಷಿ ಮತ್ತು ಸಾರ್ವಜನಿಕ ಸೇವೆಗಳನ್ನು ಸುಗಮಗೊಳಿಸಲು ಕೃತಕ ಬುದ್ಧಿಮತ್ತೆಯ ಮಹತ್ವದ ಪಾತ್ರ - ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್
3. ಕೇಂದ್ರ ಗೃಹ ಸಚಿವ ಅಮಿತ್ ಶಾ ನಾಳೆ ಅಸ್ಸಾಂಗೆ ಭೇಟಿ; ರಾಷ್ಟ್ರೀಯ ಭದ್ರತೆ, ಗಡಿ ಅಭಿವೃದ್ಧಿ, ಪ್ರಾದೇಶಿಕ ಪ್ರಗತಿ ಪರಿಶೀಲನೆ
4. ಶ್ರೀಲಂಕಾ ನೌಕಾಪಡೆಯಿಂದ ೧೧ ಭಾರತೀಯ ಮೀನುಗಾರರು ಬಿಡುಗಡೆ
5. ಟಿ-೨೦ ವಿಶ್ವಕಪ್ ಕ್ರಿಕೆಟ್ ; ಇಂದು ಪ್ರತ್ಯೇಕ ತಾಣಗಳಲ್ಲಿ ಮೂರು ಪಂದ್ಯಗಳು ಆಯೋಜನೆ

*******

ಭಾರತವು ಹೊಸ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸುವುದು ಮಾತ್ರವಲ್ಲದೆ ಅದನ್ನು ವೇಗವಾಗಿ ಅಳವಡಿಸಿಕೊಳ್ಳುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯ ಭಾರತ ಮಂಟಪದಲ್ಲಿ ಇಂದು ಬೆಳಗ್ಗೆ ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ ಅನ್ನು ಉದ್ಘಾಟಿಸಿದ ಪ್ರಧಾನಿ, ಭಾರತವು ವಿಶ್ವದ ಅತಿದೊಡ್ಡ ಟೆಕ್ ಪೂಲ್ ನ ಕೇಂದ್ರವಾಗಿದೆ ಎಂದು ಹೇಳಿದರು. ನವದೆಹಲಿಯಲ್ಲಿ ಕೃತಕ ಬುದ್ಧಿಮತ್ತೆ ಶೃಂಗಸಭೆಯನ್ನು ಆಯೋಜಿಸುತ್ತಿರುವುದು ಭಾರತ ಮತ್ತು ಜಾಗತಿಕ ದಕ್ಷಿಣಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ಅವರು ಉಲ್ಲೇಖಿಸಿದರು. ಕೃತಕ ಬುದ್ಧಿಮತ್ತೆ ಮಾನವ ಇತಿಹಾಸದಲ್ಲಿ ಪರಿವರ್ತನಾತ್ಮಕ ಅಧ್ಯಾಯವನ್ನು ಸೂಚಿಸುತ್ತದೆ. ಮಾನವ ಇತಿಹಾಸದ ಹಾದಿಯಲ್ಲಿ, ಇಡೀ ಶತಮಾನಗಳನ್ನು ರೂಪಿಸಿದ ಕೆಲವು ತಿರುವುಗಳು ಬಂದಿವೆ ಎಂದು ಅವರು ಹೇಳಿದರು. ಈ ತಿರುವುಗಳು ನಾಗರಿಕತೆಯ ದಿಕ್ಕನ್ನು ನಿಗದಿಪಡಿಸುತ್ತವೆ

ಮತ್ತು ಅಭಿವೃದ್ಧಿಯ ವೇಗವನ್ನು ಪರಿವರ್ತಿಸುತ್ತವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಕೃತಕ ಬುದ್ಧಿಮತ್ತೆಯು ಯಂತ್ರಗಳನ್ನು ಬುದ್ಧಿವಂತರನ್ನಾಗಿ ಮಾಡುತ್ತಿದೆ ಮತ್ತು ಅದೇ ಸಮಯದಲ್ಲಿ, ಇದು ಮಾನವ ಸಾಮರ್ಥ್ಯಗಳನ್ನು ಅನೇಕ ಪಟ್ಟು ಹೆಚ್ಚಿಸುತ್ತಿದೆ ಎಂದು ಅವರು ಹೇಳಿದರು. ಯಂತ್ರ ಕಲಿಕೆಯಿಂದ ಕಲಿಕಾ ಯಂತ್ರದವರೆಗಿನ ಇಂದಿನ ಪ್ರಯಾಣವು ತ್ವರಿತ ಮಾತ್ರವಲ್ಲ, ಆಳವಾದ ಮತ್ತು ವ್ಯಾಪಕವಾಗಿದೆ ಎಂದು ಪ್ರಧಾನಿ ಹೇಳಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ

ಆದ್ದರಿಂದ, ನಾವು ದೂರದೃಷ್ಟಿಯನ್ನು ಭವ್ಯವಾಗಿಡಬೇಕು ಮತ್ತು ಜವಾಬ್ದಾರಿಯನ್ನು ಸಮಾನ ಪ್ರಮಾಣದಿಂದ ನಿರ್ವಹಿಸಬೇಕು ಎಂದು ಅವರು ತಿಳಿಸಿದರು.ಇಂದಿನ ಪೀಳಿಗೆಯೊಂದಿಗೆ, ನಾವು ಯಾವ ರೀತಿಯ ಕೃತಕ ಬುದ್ಧಿಮತ್ತೆಯನ್ನು ಮುಂದಿನ ಪೀಳಿಗೆಗೆ ಹಸ್ತಾಂತರಿಸುತ್ತೇವೆ ಎಂಬುದರ ಬಗ್ಗೆಯೂ ನಾವು ಕಾಳಜಿ ವಹಿಸಬೇಕು ಎಂದು ಅವರು ಹೇಳಿದರು. ಎಐ ಅನ್ನು ಪ್ರಜಾಸತ್ತಾತ್ಮಕಗೊಳಿಸುವ ಬಗ್ಗೆ ಒತ್ತಿ ಹೇಳಿದ ಪ್ರಧಾನಿ, ಇದು ವಿಶೇಷವಾಗಿ ಜಾಗತಿಕ ದಕ್ಷಿಣಕ್ಕೆ ಸೇರ್ಪಡೆ ಮತ್ತು ಸಬಲೀಕರಣದ ಸಾಧನವಾಗಬೇಕು ಎಂದು ಹೇಳಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ

ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ತಮ್ಮ ಭಾಷಣದಲ್ಲಿ, ಕಳೆದ ವರ್ಷ ಪ್ಯಾರಿಸ್ ನಲ್ಲಿ ಫ್ರಾನ್ಸ್ ಮತ್ತು ಭಾರತ ಎಐ ಕ್ರಿಯಾ ಶೃಂಗಸಭೆಯನ್ನು ಸಹ-ಆತಿಥ್ಯ ವಹಿಸಿದಾಗ, ಸಮಾಜಗಳು ಮತ್ತು ಆರ್ಥಿಕತೆಗಳನ್ನು ಪರಿವರ್ತಿಸುವ ತಂತ್ರಜ್ಞಾನಗಳಿಗೆ ಜಾಗತಿಕ ಮಾರ್ಗದರ್ಶಿ ತತ್ವವನ್ನು ನಿಗದಿಪಡಿಸಲಾಯಿತು. ಮಾನವಕುಲದ ಒಳಿತಿಗಾಗಿ ಆರೋಗ್ಯ ರಕ್ಷಣೆ, ಇಂಧನ, ಚಲನಶೀಲತೆ, ಕೃಷಿ ಮತ್ತು ಸಾರ್ವಜನಿಕ ಸೇವೆಗಳನ್ನು ಸುಗಮಗೊಳಿಸಲು ಕೃತಕ ಬುದ್ಧಿಮತ್ತೆಯು ಮಾನವೀಯತೆಗೆ ವೇಗವಾಗಿ ಆವಿಷ್ಕಾರ ಮಾಡಲು ಅನುವು ಮಾಡಿಕೊಡುತ್ತದೆ ಎಂದು ಅವರು ಹೇಳಿದರು. ವಿಶ್ವದ ಬೇರೆ ಯಾವುದೇ ದೇಶ ನಿರ್ಮಿಸದ ಏನನ್ನಾದರೂ ಭಾರತ ನಿರ್ಮಿಸಿದೆ. ೧.೪ ಶತಕೋಟಿ ಜನರಿಗೆ ಡಿಜಿಟಲ್ ಗುರುತು, ಈಗ ಪ್ರತಿ ತಿಂಗಳು ೨೦ ಶತಕೋಟಿ ವಹಿವಾಟುಗಳನ್ನು ಪ್ರಕ್ರಿಯೆಗೊಳಿಸುವ ಪಾವತಿ ವ್ಯವಸ್ಥೆ ಮತ್ತು ೫೦೦ ದಶಲಕ್ಷ ಡಿಜಿಟಲ್ ಆರೋಗ್ಯ ಗುರುತಿನ ಚೀಟಿಗಳನ್ನು ನೀಡುವ ಆರೋಗ್ಯ ಮೂಲಸೌಕರ್ಯ ಇದೆ ಎಂದು ಫ್ರಾನ್ಸ್ ಅಧ್ಯಕ್ಷರು ಹೇಳಿದರು. ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಮಾತನಾಡಿ, ಕೃತಕ ಬುದ್ಧಿಮತ್ತೆ ಎಲ್ಲರಿಗೂ ಸೇರಿರಬೇಕು. ಕೃತಕ ಬುದ್ಧಿಮತ್ತೆಯ ಭವಿಷ್ಯವನ್ನು ಬೆರಳೆಣಿಕೆಯಷ್ಟು ದೇಶಗಳು

ನಿರ್ಧರಿಸಲು ಸಾಧ್ಯವಿಲ್ಲ ಎಂದು ಅವರು ಹೇಳಿದರು. ಅಭಿವೃದ್ಧಿಶೀಲ ರಾಷ್ಟ್ರಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ನಿರ್ಮಿಸಲು ಕೃತಕ ಬುದ್ಧಿಮತ್ತೆಯ ಜಾಗತಿಕ ನಿಧಿಗೆ ಗುಟೆರಸ್ ಕರೆ ನೀಡಿದರು.

*******

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಎರಡು ದಿನಗಳ ಭೇಟಿಗಾಗಿ ನಾಳೆ ಅಸ್ಸಾಂಗೆ ಭೇಟಿ ನೀಡಲಿದ್ದಾರೆ. ಈ ವೇಳೆ ರಾಷ್ಟ್ರೀಯ ಭದ್ರತೆ, ಗಡಿ ಅಭಿವೃದ್ಧಿ ಮತ್ತು ಪ್ರಾದೇಶಿಕ ಪ್ರಗತಿಯ ಮೇಲೆ ಕೇಂದ್ರದ ಗಮನ ಹರಿಸಲಾಗುತ್ತಿದೆ. ತಮ್ಮ ಪ್ರವಾಸದ ಮೊದಲ ಚರಣದಲ್ಲಿ ಗೃಹ ಸಚಿವರು ಬರಾಕ್ ಕಣಿವೆಯ ಸಿಲ್ಚಾರ್‌ಗೆ ಪ್ರಯಾಣಿಸಲಿದ್ದಾರೆ. ಭಾರತ-ಬಾಂಗ್ಲಾದೇಶ ಗಡಿಯ ಸಮೀಪದ ಕಟಿಗೋರಾ ಪ್ರದೇಶದ ನಟನ್ಪುರ ಗ್ರಾಮಕ್ಕೆ ಅವರು ಭೇಟಿ ನೀಡಲಿದ್ದಾರೆ. ಈ ಭೇಟಿಯ ಸಮಯದಲ್ಲಿ, ಅಮಿತ್ ಶಾ, ಭದ್ರತಾ ವ್ಯವಸ್ಥೆಗಳು ಮತ್ತು ಅಕ್ರಮ ವಲಸೆ ಮತ್ತು ಗಡಿಯಾಚೆಗಿನ ಅಪರಾಧಗಳನ್ನು ನಿಗ್ರಹಿಸಲು ಗಡಿ ಬೇಲಿಯ ಪ್ರಗತಿಯನ್ನು ವೈಯಕ್ತಿಕವಾಗಿ ಪರಿಶೀಲಿಸಲಿದ್ದಾರೆ. ಗಡಿ ಮೂಲಸೌಕರ್ಯಕ್ಕೆ ಪ್ರಮುಖ ಉತ್ತೇಜನ ನೀಡುವ ನಿಟ್ಟಿನಲ್ಲಿ, ಗೃಹ ಸಚಿವರು ಸಿಲ್ಚಾರ್ ನಿಂದ ರೋಮಾಂಚಕ ಗ್ರಾಮಗಳ ಕಾರ್ಯಕ್ರಮದ ಎರಡನೇ ಹಂತಕ್ಕೆ ಅಧಿಕೃತವಾಗಿ ಚಾಲನೆ ನೀಡಲಿದ್ದಾರೆ. ಕೇಂದ್ರ ಅನುದಾನಿತ ಈ ಉಪಕ್ರಮವು ಗಡಿ ಗ್ರಾಮಗಳನ್ನು ಆಧುನಿಕ ರಸ್ತೆಗಳು, ಟೆಲಿಕಾಂ ಸಂಪರ್ಕ ಮತ್ತು ಸುಸ್ಥಿರ ಜೀವನೋಪಾಯದ ಅವಕಾಶಗಳೊಂದಿಗೆ ಸ್ವಾವಲಂಬಿ ಕೇಂದ್ರಗಳಾಗಿ ಪರಿವರ್ತಿಸುವ ಗುರಿಯನ್ನು ಹೊಂದಿದೆ. ಗುವಾಹಟಿಯಲ್ಲಿ, ಗೃಹ ಸಚಿವರು ಶನಿವಾರ ಸರುಸಜೈ ಕ್ರೀಡಾಂಗಣದಲ್ಲಿ ಕೇಂದ್ರ ಮೀಸಲು ಪೊಲೀಸ್ ಪಡೆಯ ೮೭ನೇ ವಾರ್ಷಿಕ ಸಂಸ್ಥಾಪನಾ ದಿನದ ಪರೇಡ್‌ನಲ್ಲಿ ಭಾಗವಹಿಸಲಿದ್ದಾರೆ.

*******

ಶ್ರೀಲಂಕಾ ನೌಕಾಪಡೆಯಿಂದ ಬಂಧನಕ್ಕೆ ಒಳಗಾಗಿ ನಂತರ ಬಿಡುಗಡೆಯಾಗಿರುವ ಹನ್ನೊಂದು ಮೀನುಗಾರರು ಚೆನ್ನೈ ತಲುಪಿದ್ದಾರೆ. ಹನ್ನೊಂದು ಮೀನುಗಾರರ ಪೈಕಿ ನಾಲ್ವರು ರಾಮನಾಥಪುರಂ ಮೂಲದವರು ಮತ್ತು ಇತರ ಏಳು ಮೀನುಗಾರರು ನಾಗಪಟ್ಟಣಂ ಮತ್ತು ಮೈಲಾಡುತುರೈ ಜಿಲ್ಲೆಗಳಿಗೆ ಸೇರಿದವರಾಗಿದ್ದಾರೆ. ಕಳೆದ ವರ್ಷ ಜುಲೈನಲ್ಲಿ ಅವರನ್ನು ಬಂಧಿಸಲಾಗಿತ್ತು. ಅಂತಾರಾಷ್ಟ್ರೀಯ ಜಲಪ್ರದೇಶಕ್ಕೆ ಅತಿಕ್ರಮಣ ಮಾಡಿದ ಆರೋಪದ ಮೇಲೆ ಶ್ರೀಲಂಕಾ ನೌಕಾಪಡೆ ಅವರನ್ನು ಬಂಧಿಸಿತ್ತು. ಅವರನ್ನು ಶ್ರೀಲಂಕಾ ಕಾರಾಗೃಹಗಳಿಂದ ಬಿಡುಗಡೆ ಮಾಡಿ ಭಾರತೀಯ ವಲಸೆ ಅಧಿಕಾರಿಗಳಿಗೆ ಹಸ್ತಾಂತರಿಸಲಾಯಿತು.

*******

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯುತ್ತಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ದಿನದ ಆರಂಭಿಕ ಪಂದ್ಯದಲ್ಲಿ ಮೊದಲ ಬ್ಯಾಟಿಂಗ್ ಮಾಡಿದ ವೆಸ್ಟ್ ಇಂಡೀಸ್ ತಂಡ, ಇಟಲಿಗೆ ತಂಡಕ್ಕೆ ೧೬೬ ರನ್‌ಗಳ ಗುರಿ ನೀಡಿದೆ. ಗುರಿ ಬೆನ್ನತ್ತಿರುವ ಇಟಲಿ, ಇತ್ತೀಚಿನ ವರದಿ ಬಂದಾಗ ೨.೫ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೨೬ ರನ್ ಮಾಡಿ ಆಡುತ್ತಿದೆ. ಕೊಲಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ೨ನೇ ಪಂದ್ಯದಲ್ಲಿ ಶ್ರೀಲಂಕಾ ಮತ್ತು ಜಿಂಬಾಬ್ವೆ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಇಂದು ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿ ಸಂಜೆ ೭ ಗಂಟೆಗೆ ಅಫ್ಘಾನಿಸ್ತಾನ ಮತ್ತು ಕೆನಡಾ ತಂಡಗಳು ಸೆಣಸಲಿದೆ.

*******

ಭಾರತೀಯ ಆಹಾರ ನಿಗಮ ಮತ್ತು ವಿಶ್ವ ಆಹಾರ ಕಾರ್ಯಕ್ರಮ, ಹಸಿವನ್ನು ಎದುರಿಸುವ ಗುರಿಯನ್ನು ಹೊಂದಿರುವ ಜಾಗತಿಕ ಮಾನವೀಯ ಕಾರ್ಯಾಚರಣೆಗಳನ್ನು ಬೆಂಬಲಿಸಲು ಅಕ್ಕಿ ಪೂರೈಕೆಗಾಗಿ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಿವೆ. ತಿಳಿವಳಿಕೆ ಒಪ್ಪಂದದ ಅಡಿಯಲ್ಲಿ ಡಬ್ಲ್ಯು ಎಫ್ ಪಿಗೆ ಎಫ್ ಸಿಐ ಎರಡು ಲಕ್ಷ ಮೆಟ್ರಿಕ್ ಟನ್ ಅಕ್ಕಿಯನ್ನು ಪೂರೈಸಲಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವಾಲಯ ತಿಳಿಸಿದೆ. ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯ ಕಾರ್ಯದರ್ಶಿ ಸಂಜೀವ್ ಚೋಪ್ರಾ ಮಾತನಾಡಿ, ಈ ಒಪ್ಪಂದವು ಯಾರೂ ಹಸಿವಿನಿಂದ ಬಳಲದಂತೆ ನೋಡಿಕೊಳ್ಳುವ ದೇಶದ ಸಂಕಲ್ಪವನ್ನು ಬಿಂಬಿಸುತ್ತದೆ ಎಂದಿದ್ದಾರೆ.

*******

ದೇಶದ ಅನೇಕ ಭಾಗಗಳಲ್ಲಿ ನಿನ್ನೆ ಸಂಜೆ ಚಂದ್ರ ಕಾಣಿಸಿಕೊಂಡಿದ್ದರಿಂದ ಪವಿತ್ರ ರಂಜಾನ್ ತಿಂಗಳು ಇಂದು ಪ್ರಾರಂಭವಾಗಿದೆ. ಇಂದು ಪವಿತ್ರ ಮಾಸದ ಉಪವಾಸದ ಮೊದಲ ದಿನ. ರಂಜಾನ್ ಇಸ್ಲಾಮಿಕ್ ಕ್ಯಾಲೆಂಡರ್‌ನ ೯ನೇ ತಿಂಗಳಾಗಿದ್ದು ಈದ್-ಉಲ್-ಫಿತರ್ ಹಬ್ಬವನ್ನು ಮಾಸದ ಕೊನೆಯಲ್ಲಿ ಆಚರಿಸಲಾಗುತ್ತದೆ.

**********

ಪವಿತ್ರ ರಂಜಾನ್ ಮಾಸದ ಆರಂಭದ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಜನತೆಗೆ ಶುಭ ಕೋರಿದ್ದಾರೆ. ಈ ಸಂಬಂಧ ಸಾಮಾಜಿಕ ಜಾಲತಾಣ ಪೋಸ್ಟ್ ನಲ್ಲಿ ಪ್ರಧಾನಿ

ಅವರು ರಂಜಾನ್ ಮುಬಾರಕ್ ಎಂದು ಹೇಳಿದ್ದಾರೆ ಮತ್ತು ಈ ಪವಿತ್ರ ಮಾಸ ಸಮಾಜದಲ್ಲಿ ಒಗ್ಗಟ್ಟಿನ ಮನೋಭಾವವನ್ನು ಮತ್ತಷ್ಟು ಹೆಚ್ಚಿಸುತ್ತದೆ ಎಂದು ಭರವಸೆ ವ್ಯಕ್ತಪಡಿಸಿದ್ದು, ಎಲ್ಲೆಡೆ ಶಾಂತಿ, ಸಮೃದ್ಧಿ ಇರಲಿ ಎಂದು ಅವರು ಆಶಿಸಿದ್ದಾರೆ.

****END***